ವಿಷಯ:- ಬೆಂಗಳೂರು ಜಯನಗರ ಬಸ್ ನಿಲ್ದಾಣದಿಂದ ತುಮಕೂರಿಗೆ ತಡೆರಹಿತ ಬಸ್ ಸಂಚಾರ.

1147 (1831) **ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ):-** ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರಿನ ಜಯನಗರ ಬಸ್ ನಿಲ್ದಾಣದಿಂದ ತುಮಕೂರಿಗೆ ತಡೆರಹಿತ ಹಾಗೂ ಷಟಲ್ ಬಸ್‌ಗಳನ್ನು ಓಡಿಸಲಾಗುತ್ತಿದೆಯೇ?

ಆ) ಇಲ್ಲದಿದ್ದಲ್ಲಿ ಪ್ರತಿದಿನ ಮೇಲ್ಕಂಡ ಬಸ್ ನಿಲ್ದಾಣದಿಂದ ತುಮಕೂರಿಗೆ ಕೆಲವು ಟ್ರಿಪ್‌ಗಳನ್ನು ಓಡಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಸಚಿವರು):-

ಅ) ಇಲ್ಲ.

ಆ) ಜಯನಗರ ಬಸ್ ನಿಲ್ದಾಣದಿಂದ ತುಮಕೂರಿಗೆ ಸಾರಿಗೆ ಸೌಲಭ್ಯ ಕಲ್ಪಿಸುವುದು ಸದ್ಯದ ಪರಿಸ್ಥಿತಿಯಲ್ಲಿ ಸೂಕ್ತವಲ್ಲ.

ವಿಷಯ:- ಬೆಂಗಳೂರಿನ ಕೊಳಚೆ ಪ್ರದೇಶಗಳ ಕುರಿತು.

1148 (1830) **ಶ್ರೀ ರಾಮಲಿಂಗಾರೆಡ್ಡಿ (ಜಯನಗರ):-** ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ನಗರದಲ್ಲಿಯ ಕೊಳಚೆ ಪ್ರದೇಶಗಳೆಷ್ಟು?

ಆ) ಈ ಕೊಳಚೆ ಪ್ರದೇಶಗಳಲ್ಲಿರುವ ಮನೆಗಳೆಷ್ಟು?

ಇ) ಬೆಂಕಿ ಅನಾಹುತಗಳನ್ನು ತಡೆಗಟ್ಟಲು ಈ ನಿವಾಸಿಗಳಿಗೆ ಅಗ್ನಿ ನಿರೋಧಕ (ಫೈರ್ ಪ್ರೂಫ್) ಮನೆಗಳನ್ನು ನಿರ್ಮಿಸಲು ಸರ್ಕಾರದವರು ಮನೆಗಳನ್ನು ನಿರ್ಮಿಸಲು ಸರ್ಕಾರದವರು ಉದ್ದೇಶಿಸಿದ್ದಾರೆಯೇ?

ಈ) ಹಾಗಿದ್ದಲ್ಲಿ ಅದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು?

ಶ್ರೀ ಹೆಚ್.ಡಿ. ರೇವಣ್ಣ (ವಸತಿ ಸಚಿವರು):-

ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಒಟ್ಟು 339 ಕೊಳಚೆ ಪ್ರದೇಶಗಳಿದ್ದು, ಅವುಗಳು ಈ ಕೆಳಕಂಡ ಪ್ರಾಧಿಕಾರದ ಅಧೀನಕ್ಕೊಳಪಟ್ಟಿರುತ್ತವೆ.

1) ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಗೆ – 205

2) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ – 20

3) ಬೆಂಗಳೂರು ಮಹಾನಗರ ಪಾಲಿಕೆಗೆ – 114

ಆ) ಬೆಂಗಳೂರು ನಗರದಲ್ಲಿರುವ 339 ಕೊಳಚೆ ಪ್ರದೇಶಗಳಲ್ಲಿ ಒಟ್ಟು 1,11,172 ಮನೆಗಳಿ-

ರುವುದಾಗಿ ಅಂದಾಜು ಮಾಡಲಾಗಿದೆ.

ಇ) ವಿಶೇಷವಾಗಿ ಎಲ್ಲಾ ಕೊಳಚೆ ನಿವಾಸಿಗಳಿಗೆ ಅಗ್ನಿ ನಿರೋಧಕ ಮನೆಗಳನ್ನು ನಿರ್ಮಿಸುವ ವಿಶೇಷವಾದ ಯೋಜನೆ ಯಾವುದೂ ಅಸ್ತಿತ್ವದಲ್ಲಿರುವುದಿಲ್ಲ. ಈವರೆವಿಗೂ ನಿರ್ಮಿಸಲಾಗಿರುವ ಮನೆಗಳು ತಾರಸಿ ಹಾಗೂ ಕಲ್ನಾರು ಶೀಟುಗಳಿಂದ ಕೂಡಿದ್ದು ಬೆಂಕಿಯ ಅನಾಹುತದಿಂದ ರಕ್ಷಣೆ ಪಡೆಯಬಹುದಾಗಿರುತ್ತವೆ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಆನೇಕಲ್ ತಾಲ್ಲೂಕಿನಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ನೀಡಿರುವ ಸರ್ಕಾರಿ ಜಮೀನು.

1149 (1834) **ಶ್ರೀ ರಾಮಲಿಂಗಾರೆಡ್ಡಿ (ಜಯನಗರ):-** ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಆನೇಕಲ್ ತಾಲ್ಲೂಕು ಸರ್ಜಾಪುರ ಹೋಬಳಿ ಮುತ್ತುನಲ್ಲೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಸಿಂಗೇನ ಅಗ್ರಹಾರ ಗ್ರಾಮದ ಸರ್ವೆ ನಂ. 57ರಲ್ಲಿ ಎಷ್ಟು ಎಕರೆ ಜಮೀನನ್ನು ಕೃಷಿ ಮಾರುಕಟ್ಟೆ ಸಮಿತಿಗೆ ನೀಡಲಾಗಿದೆ?

ಆ) ಈ ಜಮೀನನ್ನು ಯಾವಾಗ ಮಂಜೂರು ಮಾಡಲಾಯಿತು?

ಇ) ಕೃಷಿ ಮಾರುಕಟ್ಟೆ ಸಮಿತಿಯವರು ಈ ಜಮೀನಿನಲ್ಲಿ ಯಾವುದೇ ವಿಧವಾದ ಕಟ್ಟಡ ನಿರ್ಮಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಈ ಜಮೀನನ್ನು ಕೆಲವು ಖಾಸಗಿ ವ್ಯಕ್ತಿಗಳು ಒತ್ತುವರಿ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ ಮೇಲ್ಕಂಡ ಜಮೀನನ್ನು ರಕ್ಷಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್. ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು):-

ಅ) ಸರ್ವೆ ನಂ. 57ರಲ್ಲಿ 20 ಎಕರೆ 8 ಗುಂಟೆ ಜಮೀನನ್ನು ಸರ್ಕಾರ ಮಂಜೂರು ಮಾಡಿದೆ.

ಆ) ದಿನಾಂಕ 24-5-95ರಂದು ಮಂಜೂರು ಮಾಡಿದ್ದು ದಿನಾಂಕ 15-12-85ರಂದು ಸಮಿತಿಯ ವಶಕ್ಕೆ ಪಡೆಯಲಾಗಿದೆ.

ಇ) ಹೌದು

ಈ) ಹೌದು

ಉ) ಜಮೀನನ್ನು ಭೂಮಾಪನ ಇಲಾಖೆ ಅಧಿಕಾರಿಗಳಿಂದ ಅಳತೆ ಮಾಡಿಸುವ ಬಗ್ಗೆ ವಿನಂತಿಸಿದ್ದು, ತಂತಿ ಬೇಲಿ ಹಾಕಿಸಿ ಜಮೀನನ್ನು ರಕ್ಷಿಸಿಸಲು ಕ್ರಮ ಕೈಗೊಳ್ಳಲಾಗುವುದು.